ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಕರ್ನಾಟಕ ಕೃಷಿ ಇಲಾಖೆ

ಸಮಗ್ರ ಕೃಷಿ ಹವಾಮಾನ ವಿಭಾಗ

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು-೬೫

ತುರುವೇಕೆರೆ ಹೋಬಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ: **03.12.2013**

ಈ ವಾರದ ಮುನ್ಸೂಚನೆ (ದಿನಾಂಕ **04-12-13 to 08.12.13** ವರೆಗೆ)

ನಿಯತಾಂಕಗಳು	04.12.13	05.12.13	06.12.13	07.12.13	08.12.13
ಮಳೆ (ಮಿ ಮಿ)	0	0	0	0	0
ಗರಿಷ್ಠ ಉಷ್ಣಾಂಶ(ಡಿ.ಸೆ.)	30	31	30	31	30
ಕನಿಷ್ಠ ಉಷ್ಣಾಂಶ (ಡಿ.ಸೆ.)	16	17	16	17	16
ಮೋಡ (ಪ್ರಮಾಣ)	3	4	4	4	3
ಆರ್ದ್ರತೆ ೭.೨೦ ಬೆ (ಶೇ)	74	72	74	73	72
ಆರ್ದ್ರತೆ ೨.೨೦ ಮ (ಶೇ)	51	53	54	51	52
ಗಾಳಿಯ ವೇಗ (ಕಿ.ಮಿ/ಗಂಟೆಗೆ)	5	6	5	6	6
ಗಾಳಿಯ ದಿಕ್ಕು (ಡಿಗ್ರಿ)	70	70	90	80	70

ಈ ವಾರದ ಮುನ್ಸೂಚನೆಯ ಪ್ರಕಾರ ಮುಂದಿನ ಐದು ದಿನಗಳ ಸಮೀಕ್ಷೆಯ ಪ್ರಕಾರ ಮಳೆ ಸಂಪೂರ್ಣ ಕ್ಷೀಣಿಸಿದ್ದು. ದಿನದ ಗರಿಷ್ಠ ಉಷ್ಣಾಂಶ 30.0-31.0^{o}C ಮತ್ತು ಕನಿಷ್ಠ 16.0-17.0 ^{o}C ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ 72-74 % ಇದ್ದು, ಮಧ್ಯಾಹ್ನ 51-54 % ಇರುವುದು ಮತ್ತು ಗಾಳಿಯು ನೈರುತ್ಯ ಧಿಕ್ಕಿನಿಂದ ಗಂಟೆಗೆ ಸರಾಸರಿ 5-6 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ಮಳೆಯು ಇಲ್ಲದಿರುವುದರಿಂದ ಕಟಾವಿಗೆ ಸೂಚಿಸಲಾಗಿದೆ ಕಟಾವಿಗೆ ಬಂದಿರುವ ನೆಲೆಗಡಲೆ ಮತ್ತು ಮೆಕ್ಕೆಜೋಳ ಹಾಗೂ ರಾಗಿಯನ್ನು ಕಟಾವು ಮಾಡಿ ಒಣಗಿಸಲು ಸೂಚಿಸಲಾಗಿದೆ.
- ತೊಗರಿಯಲ್ಲಿ ಕಾಯಿ ಕೊರೆಯುವ ಹುಳು ಕಂಡುಬಂದಲ್ಲಿ ಲ್ಯಾನೇಟ್ (ಮಿಥೊಮಿಲ್) (1 ಗ್ರಾಂ ಪ್ರತಿ ಲೀ. ನೀರಿಗೆ ಬೆರೆಸಿ) ಸಿಂಪಡಿಸಲು ಸೂಚಿಸಲಾಗಿದೆ. ಇದಲ್ಲದೇ, ಫ್ಲ್ಲಾಶ್ ಅಥವಾ ಎಕಾಲಕ್ಸ್ (2 ಮಿ.ಲೀ. ಪ್ರತಿ ಲೀ. ನೀರಿಗೆ ಬೆರೆಸಿ) ಸಿಂಪಡಿಸಲು ಸೂಚಿಸಲಾಗಿದೆ.
- ಹೂ ಕೋಸು ಹಾಗೂ ಎಲೆ ಕೋಸುವಿನಲ್ಲಿ ಎಲೆ ತಿನ್ನುವ ಹುಳು (ಡೈಮಂಡ್ ಬ್ಯಾಕ್ ಮಾತ್): ಇವುಗಳನ್ನು ಹತೋಟಿ ಮಾಡಲು ಕ್ವಿನಾಲ್ಫಾಸ್ ಅಥವಾ ಕ್ಲೋರೊಪೈರಿಫ಼ಾಸ್ ಅನ್ನು 2.5 ಮಿ.ಲೀ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸುವುದು ಸೂಕ್ತ.
- ದನಕರುಗಳಿಗೆ ಕಾಲುಬಾಯಿ ರೋಗ ಕಂಡುಬಂದಿರುವುದರಿಂದ ಮುನ್ನೆಚ್ಚರಿಕೆ ಕ್ರಮವಹಿಸಿ ಲಸಿಕೆ ಹಾಕಿಸುವುದು.

ನೋಡಲ್ ಅಧಿಕಾರಿ:
ಡಾ.ಎಮ್.ಬಿ. ರಾಜೇಗೌಡ
ಬೆಂಗಳೂರು.